ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/31/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 11.10.2021

**ಸುತ್ತೋಲೆ**

**ವಿಷಯ :** ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸಮ ಸೆಮಿಸ್ಟರ್‌ಗೆ ನೇಮಕ ಮಾಡಿಕೊಂಡಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಅನುಮೋದನೆ ಮತ್ತು ಭತ್ಯೆ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸುವ ಕುರಿತು.

**ಉಲ್ಲೇಖ:** ಈ ಕಛೇರಿ ಸುತ್ತೋಲೆ ಸಂಖ್ಯೆ: DTE-ADMIOEST(3)/31/2021, ದಿ: 06.08.2021.

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನ 2, 4 ಮತ್ತು 6 ನೇ ಸೆಮಿಸ್ಟರ್ ಅವಧಿಯ ತರಗತಿಗಳ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅತಿಥಿ ಉಪನ್ಯಾಸಕರನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿತ್ತು. ಈ ಸಂಬಂಧ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ಅನುಮೋದನೆ ಮತ್ತು ಭತ್ಯೆ ಮಂಜೂರಾತಿ ನೀಡಲು ಕೂಡಲೇ ದಾಖಲೆಗಳೊಂದಿಗೆ ಪೂರ್ಣ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

**ಆಡಳಿತಾಧಿಕಾರಿ,**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ.

**ಪ್ರತಿ:-**

1. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.